ಅ) ರಾಜ್ಯದಲ್ಲಿನ ಪಶು ಆಸ್ಪತ್ರೆಗಳಿಗೆ ಅವಶ್ಯಕವಿರುವಷ್ಟು ಔಷಧಿಗಳ ಸರಬರಾಜು ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು) :

ಅ) ಹೌದು ಅದಾಗ್ಯೂ ಜಿಲ್ಲಾ ಪಂಚಾಯತ್ ಮತ್ತು ಕರ್ನಾಟಕ ಕುರಿ ಮತ್ತು ಕುರಿ ಉತ್ಪನ್ನಹಳ ಅಭಿವೃದ್ಧಿ ಮಂಡಳಿಯಿಂದ ಅನುಕ್ರಮವಾಗಿ ರೂ. 22 l. 35 ಲಕ್ಷಗಳು ಮತ್ತು ರೂ. 140.00 ಲಕ್ಷಗಳ ಔಷಧಿಯನ್ನು 1999- 2000ನೇ ಸಾಲಿನಲ್ಲಿ ಒದಗಿಸಲಾಗಿದೆ.

ಆ) ವರ್ಷದಲ್ಲಿ ಬೇಕಾದ ಪ್ರಮಾಣದ ಔಷಧಿಯನ್ನು ಒದಗಿಸಲು ಪ್ರಯತ್ನಿಸಲಾಗುತ್ತಿದೆ.

ಪುತ್ತೂರಿನ ವಾರ್ತಾ ಭವನದಲ್ಲಿ ಮಂಜೂರಾದ ಹುದ್ದೆಗಳು

1334 (1495) ಶ್ರೀ ಡಿ.ವಿ.ಸದಾನಂದ ಗೌಡ (ಪುತ್ತೂರು) : ಮಾನ್ಯ ವಾರ್ತಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ವಾರ್ತಾ ಭವನದಲ್ಲಿ ಒಟ್ಟು ಮಂಜೂರಾದ ಹುದ್ದೆಗಳೆಷ್ಟು? ಪ್ರಸ್ತುತ ಅಲ್ಲಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ: ಎಷ್ಟು? ಉಳಿಕೆಯನ್ನು ಯಾವಾಗ ಭರ್ತಿ ಮಾಡಲಾಗುವುದು.

ಆ) ಸದ್ಯ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು? ಈ ಖಾಲಿ ಹುದ್ದೆಗಳನ್ನು ಎಂದಿನಿಂದ ತುಂಬಲಾಗುವುದು?

ಇ) ಪುತ್ತೂರು ವಾರ್ತಾ ಇಲಾಖೆಯನ್ನು ಪುತ್ತೂರಿನಿಂದ ಎತ್ತಂಗಡಿ ಮಾಡುವ ಇರಾದೆ ಸರ್ಕಾರಕ್ಕಿದೆಯೇ? ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು?

ಪ್ರೊ।। ಬಿ.ಕೆ. ಚಂದ್ರಶೇಖರ್ (ವಾರ್ತಾ ಸಚಿವರು) :

ಅ) ಒಟ್ಟು ಮಂಜೂರಾದ ಹುದ್ದೆಗಳು- 5 ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ 3 ಉಳಿಕೆ ಹುದ್ದೆಗಳನ್ನು ಶೀಘ್ರದಲ್ಲಿಯೇ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಆ) ಸದ್ಯ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎರಡು. ಶೀಘ್ರದಲ್ಲಿಯೇ ಭರ್ತಿ ಮಾಡಲಾಗುವುದು.

ಇ) ಇಲ್ಲ.

ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಧಾರ್ಮಿಕ ಕ್ಷೇತ್ರಗಳಿಗೆ ಸೌಲಭ್ಯ

1335 (1497) ಶ್ರೀ ಡಿ.ವಿ. ಸದಾನಂದಗೌಡ (ಪುತ್ತೂರು) : ಮಾನ್ಯ ಪ್ರವಾಸೋದ್ಯಮ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಯೋಜನೆಗಳೇನು; ಅಂದಾಜು ಯೋಜನಾ ಮೊತ್ತವೆಷ್ಟು?

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ವಿವಿಧ ಧಾರ್ಮಿಕ ಕ್ಷೇತ್ರಗಳಿಗೆ ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿಗಳಿಗೆ ವೀಕ್ಷಿಸಲು ಒದಗಿಸಿರುವ ಸೌಲ್ಯಗಳೇನು; ಮುಂದಿನ ಯೋಜನೆಗಳೇನು?

ಶ್ರೀ ಆರ್.ರೋಷನ್ ಬೇಗ್ (ಪ್ರವಾಸೋದ್ಯಮ ಮತ್ತು ಹಜ್ ಸಚಿವರು) :

ಅ) 1) ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಪ್ರವಾಸಿ ಕೇಂದ್ರಗಳನ್ನು 5 ಸರ್ಕ್ಯೂಟಗಳಾಗಿ ವಿಂಗಡಿಸಲಾಗಿದೆ. ಇದಕ್ಕಾಗಿ ರೂ 4460.00 ಕೋಟಿಗಳ ಮಾಸ್ಟರ್ ಪ್ಲಾನನ್ನು ತಯಾರಿಸಿದ್ದು ಇದರಲ್ಲಿ ಖಾಸಗೀ ಬಂಡವಾಳದಾರರಿಂದ ಶೇಕಡ 70ರಷ್ಟು ಹಾಗೂ ಸರ್ಕಾರದ ವತಿಯಿಂದ ಶೇಕಡ 30ರಷ್ಟನ್ನು ತೊಡಗಿಸಲು ನಿರೀಕ್ಷಿಸಲಾಗಿದೆ.

2) ನೂತನ ಪ್ರವಾಸೋದ್ಯಮ ನೀತಿಯನ್ನು 1-6-97 ರಿಂದ ಜಾರಿಗೆ ತರಲಾಗಿದೆ. ಈ ನೀತಿಯ ಅಡಿಯಲ್ಲಿ ಖಾಸಗಿ ಉದ್ದಿಮೆದಾರರಿಗೆ ಪ್ರವಾಸೋದ್ಯಮದಲ್ಲಿ ಬಂಡವಾಳ ಹೊಡಲು ವಿವಿಧ ರೀತಿಯ ರಿಯಾಯಿತಿ ಹಾಗೂ ಸಹಾಯಧನವನ್ನು ಉತ್ತೇಜನವಾಗಿ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.

3) ಹಂಪಿ, ಜೋಗ್ ಮತ್ತು ಕರಾವಳಿ ಪ್ರದೇಶಗಳನ್ನು ಸಮಗ್ರ ಅಭಿವೃದ್ಧಿಪಡಿಸುವ ಸಲುವಾಗಿ ಇದರ ಬಗ್ಗೆ ಪ್ರತ್ಯೇಕ ಅಧ್ಯಯನ ವರದಿಗಳನ್ನು ನೀಡಲು ನುರಿತ ಸಂಸ್ಥೆಗಳನ್ನು ನಿಯೋಜಿಸಲಾಗಿದೆ.

4) ಪ್ರಸ್ತುತ ಸಾಲಿನಲ್ಲಿ ರೂ 710.00 ಲಕ್ಷಗಳನ್ನು ಸದರಿ ಯೋಜನೆಗಳ ಅನುಷ್ಠಾನಕ್ಕಾಗಿ ಆಯವ್ಯಯದಲ್ಲಿ ಒದಗಿಸಲಾಗಿದೆ.

ಆ) 1) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ವತಿಯಿಂದ ವಾರಕ್ಕೊಮ್ಮೆ ದಕ್ಷಿಣ ಕನ್ನಡ ಜಿಲ್ಲೆಯ ಧಾರ್ಮಿಕ ಸ್ಥಳಗಳಿಗೆ ಐದು ದಿನಗಳ ವ್ಯವಸ್ಥಿತ ಪ್ರವಾಸಗಳನ್ನು ನಡೆಸಲಾಗುತ್ತಿದೆ.

2) ದಕ್ಷಿಣ ಕನ್ನಡ ಜಿಲ್ಲೆಯ ಉಲ್ಲಾಳದ ಮದನಿ ದರ್ಗಕ್ಕೆ ರೂ 20.00 ಲಕ್ಷ ವೆಚ್ಚದಲ್ಲಿ ಕಾಂಕ್ರೀಟೀಕರಣ ಮತ್ತು ವಿದ್ಯುತ್ತೀಕರಣ ವ್ಯವಸ್ಥೆಗಾಗಿ ಅನುದಾನ ಒದಗಿಸಲಾಗಿದೆ.

ರಾಜ್ಯದಲ್ಲಿ ಅರಣ್ಯ ಒತ್ತುವರಿ ಮಾಡಿರುವ ಬಗ್ಗೆ

1336 (1498) ಶ್ರೀ ಸದಾನಂದ ಗೌಡ ಡಿ.ವಿ. (ಪುತ್ತೂರು) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿನ ಅರಣ್ಯವನ್ನು ಒತ್ತುವರಿ ಮಾಡಿ ಕೃಷಿ ಮಾಡಿರುವ ಪ್ರದೇಶಗಳ ವಿಸ್ತೀರ್ಣ ಎಷ್ಟು? ಒತ್ತುವರಿ ತೆರವು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) ಒತ್ತುವರಿ ಮಾಡಿರುವ ಜಾಗಗಳನ್ನು ಒತ್ತುವರಿ ಮಾಡಿದವರಿಗೆ ಬಿಟ್ಟುಕೊಡುವ ಇರಾದೆ ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು?

ಇ) ಒತ್ತುವರಿ ತೆರವು ಮಾಡುವ ಇರಾದೆ ಸರ್ಕಾರಕ್ಕಿದ್ದರೆ ಎಂದು ಒತ್ತುವರಿಯನ್ನು ತೆರವು ಮಾಡಿಸಲಾಗುವುದು?